ಚುಟುಕು ಸುದ್ದಿ

10 ಲಕ್ಷ ವೆಚ್ಚದಲ್ಲಿ ತಡೆಗೋಡೆ ನಿರ್ಮಾಣಕ್ಕೆ ಭೂಮಿಪೂಜೆ

ಮಂಗಳೂರು: ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ 51ನೇ ಅಳಪೆ ಉತ್ತರ ವಾರ್ಡಿನ ಕನ್ನಗುಡ್ಡೆ ಸಂತೋಷ್ ಮನೆಯ ರಾಜಕಾಲುವೆ ಕುಸಿದ ಭಾಗಕ್ಕೆ ತಡೆಗೋಡೆ ನಿರ್ಮಾಣ ಕಾಮಗಾರಿಗಾಗಿ ಹತ್ತು ಲಕ್ಷ ವೆಚ್ಚದಲ್ಲಿ ನಡೆಯಲಿದ್ದು ಹಲವು ಪ್ರಮುಖರ ಉಪಸ್ಥಿತಿಯಲ್ಲಿ ಭೂಮಿ ಪೂಜೆಯು ನಡೆಯಿತು.

ಕನ್ನಗುಡ್ಡೆಯು ಎತ್ತರದ ಪ್ರದೇಶವಾಗಿದ್ದು, ಪ್ರಾಕೃತಿಕ ವಿಕೋಪ ಸಂದರ್ಭದಲ್ಲಿ ಹಾನಿ ಪ್ರಮಾಣವೂ ಹೆಚ್ಚಾಗಿರುತ್ತದೆ. ಈ ಹಿಂದೆ ಮಳೆಗಾಲದದಲ್ಲಿ ಉಂಟಾಗಿರುವ ಹಾನಿಯನ್ನು ಸರಿಪಡಿಸುವ ನಿಟ್ಟಿನಲ್ಲಿ ಈ ಕಾಮಗಾರಿ ಆರಂಭವಾಗಲಿದೆ. ಪ್ರವೀಣ್ ನಿಡ್ಡೇಲ್, ಸುರೇಶ್ ಆಚಾರ್, ಸುರೇಶ್ ಕನ್ನಗುಡ್ಡ, ದೀಕ್ಷಿತ್ ಕನ್ನಗುಡ್ಡ, ಕಿಶೋರ್, ಗಣೇಶ್, ವಿವೇಕ್, ವಿಜಯ್, ಸುಧೇಶ್, ದೀಕ್ಷಿತ್ ಅರ್ಲಪೆಟ್ಟು, ಕವಿರಾಜ್, ದಾಮೋದರ್ ಮತ್ತಿತರರು ಉಪಸ್ಥಿತರಿದ್ದರು.

ಸಹ ಸಂಚಾಲಕರ ಆಯ್ಕೆ

ಉಡುಪಿ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರ ಆಯೋಜಿಸುತ್ತಿರುವ ಮನೆಗೊಂದು ಗ್ರಂಥಾಲಯ ಅಭಿಯಾನದ ಉಡುಪಿ ಜಿಲ್ಲೆಯ

ಸಹ ಸಂಚಾಲಕರನ್ನಾಗಿ ಕನ್ನಡ ಸಾಹಿತ್ಯ ಪರಿಷತ್ ಉಡುಪಿ ತಾಲೂಕು ಅಧ್ಯಕ್ಷ ರವಿರಾಜ್ ಎಚ್.ಪಿ ಅವರನ್ನು ನೇಮಕ ಮಾಡಿ ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ.ಮಾನಸ ಆದೇಶಿಸಿದ್ದಾರೆ.

ಸಮಿತಿ ಸದಸ್ಯರಾಗಿ ಕಸಾಪ ಉಡುಪಿ ತಾಲೂಕು ಗೌರವ ಕಾರ್ಯದರ್ಶಿಗಳಾದ ಜನಾರ್ದನ್ ಕೊಡವೂರು ಮತ್ತು ರಂಜನಿ ವಸಂತ್, ಕೋಶಾಧಿಕಾರಿ ರಾಜೇಶ್ ಭಟ್ ಪಣಿಯಾಡಿ, ಸಂಘಟನಾ ಕಾರ್ಯದರ್ಶಿಗಳಾದ ಸತೀಶ್ ಕೊಡವೂರು, ರಾಘವೇಂದ್ರ ಪ್ರಭು ಕರ್ವಾಲು, ಡಾ.ರಶ್ಮಿ ಅಮೈಬಳ, ದೀಪಾ ಚಂದ್ರಕಾಂತ್, ಸಿದ್ದಬಸಯ್ಯಸ್ವಾಮಿ ಚಿಕ್ಕಮಠ ಅವರನ್ನು ಆಯ್ಕೆ ಮಾಡಲಾಗಿದೆ.

ಯದ್ವಾತದ್ವಾ ಬೈಕ್ ಓಡಿಸಿದ ವ್ಯಕ್ತಿ!

ಮೂಡುಬಿದಿರೆ: ಹಲವಾರು ರಸ್ತೆ ಅಪಘಾತಗಳಾಗಿ ಜೀವ ಕಳೆದುಕೊಂಡಿರುವ ಕಾರ್ಕಳ–ಮೂಡುಬಿದಿರೆ ರಾ.ಹೆದ್ದಾರಿಯ ಬನ್ನಡ್ಕ–ಬೆಳುವಾಯಿ ಮಾರ್ಗದಲ್ಲಿ ವ್ಯಕ್ತಿಯೋರ್ವ ಯದ್ವಾತದ್ವಾ ಬೈಕ್ ಓಡಿಸಿ ಸ್ಥಳೀಯರ ಕೆಂಗಣ್ಣಿಗೆ ಗುರಿಯಾಗಿದ್ದಾನೆ.

ಅಪಘಾತ ವಲಯದಲ್ಲಿ ತನ್ನೆರಡು ಕೈಗಳನ್ನು ಬಿಟ್ಟು, ಡಾನ್ಸ್ ಹಾಗೂ ವಿವಿಧ ಸನ್ನೆಗಳನ್ನು ಮಾಡುತ್ತಾ ವಾಹನ ಚಲಾಯಿಸಿ ಹುಚ್ಚಾಟ ತೋರಿಸುತ್ತಿದ್ದ ಅವನನ್ನು ಸ್ಥಳೀಯ ಯುವಕರು ಕಾರಿನಲ್ಲಿ ಬೆನ್ನತ್ತಿ ವಿಡಿಯೋ ಚಿತ್ರೀಕರಿಸಿದ್ದಾರೆ. ಬಳಿಕ ಬೈಕ್ ನಿಲ್ಲಿಸಿ ಆತನನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ರಸ್ತೆಯಲ್ಲಿ ಇಂತಹ ಹುಚ್ಚಾಟಗಳು ಹೆಚ್ಚಾಗುತ್ತಿದ್ದು, ಇದು ಸವಾರನ ಅಥವಾ ಇತರ ವಾಹನ ಸವಾರರ ಜೀವಕ್ಕೆ ಹಾನಿ ತರಬಹುದು ಎಂದು ಸ್ಥಳೀಯರು ಕಳವಳ ವ್ಯಕ್ತಪಡಿಸಿದ್ದಾರೆ. ರಸ್ತೆ ಸುರಕ್ಷತಾ ನಿಯಮ ಉಲ್ಲಂಘಿಸುವವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಉತ್ಪನ್ನಗಳ ಬೆಲೆ ಕಡಿತ

ಮಂಗಳೂರು: ಹೈನೆಕೆನ್ ಕಂಪನಿಯ ಅಂಗ ಸಂಸ್ಥೆ ಯುನೈಟೆಡ್ ಬ್ರೂವರೀಸ್ ರಾಜ್ಯದಲ್ಲಿ ತನ್ನ ಬಿಯರ್ ಉತ್ಪನ್ನಗಳ ಬೆಲೆಯಲ್ಲಿ ಇಳಿಕೆ ಮಾಡುವುದಾಗಿ ಘೋಷಿಸಿದೆ. ಸಾಮಾನ್ಯ ಹಾಗೂ ಪ್ರೀಮಿಯಂ ವಿಭಾಗಗಳ ಉತ್ಪನ್ನಗಳ ಬೆಲೆಗಳನ್ನು ಕಡಿತಗೊಳಿಸಲಾಗಿದೆ.

ಕಿಂಗ್‌ಫಿಷರ್ ಪ್ರೀಮಿಯಂ, ಕಿಂಗ್‌ಫಿಷರ್ ಅಲ್ಟ್ರಾ ಹಾಗೂ ಹೈನೆಕೆನ್‌ಆರ್ ಸೇರಿದಂತೆ ಜನಪ್ರಿಯ ಬ್ರಾ ್ಯಂಡ್‌ಗಳು ರಾಜ್ಯದ ಗ್ರಾಹಕರಿಗೆ ಇನ್ನಷ್ಟು ಕೈಗೆಟುಕುವ ದರದಲ್ಲಿ ಲಭ್ಯವಾಗಲಿವೆ. ಈ ಬೆಲೆ ಪರಿಷ್ಕರಣೆ, ಗ್ರಾಹಕರಿಗೆ ಹೆಚ್ಚಿನ ಮೌಲ್ಯ ಒದಗಿಸುವ ಮೂಲಕ ಬಿಯರ್ ವಿಭಾಗದ ಬೆಳವಣಿಗೆಯನ್ನು ಉತ್ತೇಜಿಸುವ ಯುಬಿಎಲ್‌ನ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಕಂಪೆನಿಯ ವಕ್ತಾರರು ತಿಳಿಸಿದ್ದಾರೆ.

ನಿಧನ ವಾರ್ತೆ

ಶತಾಯುಷಿ ರಾಜಮ್ಮ

ಬಂಟ್ವಾಳ: ಇಲ್ಲಿನ ಕೊಯಿಲ ಕ್ವಾರ್ಟಸ್ ನಿವಾಸಿ, ದಿವಂಗತ ಗೋವಿಂದ ಸ್ವಾಮಿ ಇವರ ಪತ್ನಿ ರಾಜಮ್ಮ (103) ಇವರು ಅಸೌಖ್ಯದಿಂದ ಸ್ವಗೃಹದಲ್ಲಿ ಗುರುವಾರ ರಾತ್ರಿ ನಿಧನರಾದರು.

ಮೃತರು ಇಬ್ಬರು ಪುತ್ರರು ಮತ್ತು ಮೂವರು ಪುತ್ರಿಯರನ್ನು ಅಗಲಿದ್ದಾರೆ. ಮೃತರು 70 ವರ್ಷಗಳ ಹಿಂದೆ ಕಲ್ಲು ಕಡಿಯುವ ವೃತ್ತಿಗೆ ಸಂಬಂಧಿಸಿದಂತೆ ಕೊಯಿಲದಲ್ಲಿ ಬಂದು ನೆಲೆಸಿದ್ದರು.

ಉಮಾಶಂಕರ್

ಮಂಗಳೂರು: ಗುಜ್ಜರಕೆರೆ ತೀರ್ಥ ಸಂರಕ್ಷಣಾ ವೇದಿಕೆಯ ಜೊತೆ ಕಾರ್ಯದರ್ಶಿ ಉಮಾಶಂಕರ್ (78) ಶುಕ್ರವಾರ ನಿಧನರಾದರು. ಮೃತರು ಪತ್ನಿ, ಪುತ್ರಿ ಮತ್ತು ಬಂಧು ಬಳಗವನ್ನು

ಅಗಲಿದ್ದಾರೆ. ಅವರು ಪಿಯರ್ಸ್ ಲೆಸ್ಲಿ ಸಂಸ್ಥೆಯಲ್ಲಿ 45 ವರ್ಷಗಳ ಕಾಲ ಸೇವೆ ಸಲ್ಲಿಸಿ ನಿವೃತ್ತರಾಗಿದ್ದರು.

ಕಳೆದ 2 ದಶಕಗಳಲ್ಲಿ ಜಿಲ್ಲೆಯ ಐತಿಹಾಸಿಕ ಮತ್ತು ಧಾರ್ಮಿಕ ಮಹತ್ವದ ಪವಿತ್ರ ತೀರ್ಥಕೆರೆ ಗುಜ್ಜರಕೆರೆಯ ಸಂರಕ್ಷಣೆಯ ಹೋರಾಟದ ಹಾದಿಯಲ್ಲಿ ಅವರ ಸಲಹೆ, ಸಹಕಾರ ಮತ್ತು ಮಾರ್ಗದರ್ಶನವನ್ನು ಸದಾ ನೀಡುತ್ತಿದ್ದರು. ಅವರ ನಿಧನಕ್ಕೆ ಗುಜ್ಜರಕೆರೆ ತೀರ್ಥ ಸಂರಕ್ಷಣಾ ವೇದಿಕೆ ಸಂತಾಪ ಸೂಚಿಸಿದೆ.

ಕಾಂಗ್ರೆಸ್ ಪಕ್ಷ ಚುನಾವಣಾ ಆಯೋಗದ ಆದೇಶವನ್ನು ಪಾಲಿಸುತ್ತಿದೆ | ಬಿಜೆಪಿಗೆ ಎಲ್ಲೆಡೆ ಚುನಾವಣೆ ಗೆಲ್ಲಿಸುವುದೇ ಉದ್ದೇಶ

ರಾಜ್ಯದಲ್ಲಿ ಎಸ್‌ಐಆರ್: ಹೋರಾಟದ ಕುರಿತು ಚರ್ಚೆ

ಸಂ.ಕ.ಸಮಾಚಾರ, ಮಂಗಳೂರು

ಕಾಂಗ್ರೆಸ್ ಪಕ್ಷ ಚುನಾವಣಾ ಆಯೋಗ ಆದೇಶವನ್ನು ಪಾಲಿಸುತ್ತಿದೆ. ಆದರೆ ಎಸ್‌ಐಆರ್‌ನಲ್ಲಿರುವ ವಿಷಯಗಳ ಬಗ್ಗೆ ಹೇಗೆ ಹೋರಾಡಬೇಕು ಎಂಬ ಬಗ್ಗೆ ಚರ್ಚೆ ಮಾಡುತ್ತಿದ್ದೇವೆ. ಕರ್ನಾಟಕದಲ್ಲಿ ಏನು ಪ್ರಯೋಗ ಮಾಡುತ್ತಾರೆ ಎಂದು ಗೊತ್ತಿಲ್ಲ. ಮತದಾರರ ಪಟ್ಟಿಯಲ್ಲಿ ಇದ್ದ ಹೆಸರು ತೆಗೆದು ಹಾಕಿ ಮತದಾನ ಹಕ್ಕು ಕಳೆದುಕೊಂಡರೆ ಅದಕ್ಕೆ ಏನು ಪರಿಹಾರ? ಅದಕ್ಕೆ ಕಾನೂನಾತ್ಮಕವಾಗಿ ಹೋರಾಟ ಮಾಡುತ್ತೇವೆ ಎಂದು ದ.ಕ.ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಶುಕ್ರವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಪಶ್ಚಿಮ ಬಂಗಾಲದಲ್ಲಿ ಸಾಫ್ಟ್‌ವೇರ್ ಉಪಯೋಗ ಮಾಡಿದ್ದರು. ಯಾವ ಯಾವ ಮತಗಳನ್ನು ತೆಗೆಯಬೇಕು ಎಂದು ಆ ಸಾಫ್ಟ್‌ವೇರ್ ನಿರ್ಧಾರ ಮಾಡಿತು. ಆ ರೀತಿ ಇಲ್ಲಿ ಅವಕಾಶ ಸಿಗಬಾರದು. ಅಲ್ಲದೆ ಎಐ ಫಾರ್ಮುಲಾ ಬಳಕೆ ಮಾಡಿದ್ದರು. ಕರ್ನಾಟಕದಲ್ಲಿ ಏನು ತೆಗೆದುಕೊಂಡು ಬರುತ್ತಾರೆ ಎಂದು ಗೊತ್ತಿಲ್ಲ. ಚುನಾವಣಾ ಆಯೋಗಕ್ಕೆ ಸುಪ್ರೀಂ ಪವರ್ ಕೊಟ್ಟಿದ್ದಾರೆ. ಚುನಾವಣಾ ಆಯೋಗದ ವಿರುದ್ಧ ಕೋರ್ಟ್‌ನಲ್ಲಿಯೂ ಪ್ರಶ್ನೆ ಮಾಡುವಂತಿಲ್ಲವಂತೆ. ಆ ಕಾನೂನು

ತೆಗೆದುಕೊಂಡು ಬಂದಿದ್ದಾರೆ. ಹಾಗಾಗಿ ಮುಕ್ತವಾಗಿ ಪಕ್ಷಪಾತ, ದುರುಪಯೋಗ ಮಾಡುತ್ತಿದ್ದಾರೆ. ಕರ್ನಾಟಕದಲ್ಲಿ ಬಿಜೆಪಿಯವರು ಎಷ್ಟೇ ಭ್ರಷ್ಟರಾಗಿದ್ದರೂ ಅವರನ್ನು ಯಾರೂ ಮುಟ್ಟುವುದಿಲ್ಲ. ಚುನಾವಣೆ ಗೆಲ್ಲುವುದೇ ಅವರಿಗೆ ಮುಖ್ಯವಾಗಿದೆ. ನಮ್ಮ ಪತ್ರಿಕಾ ಸ್ವಾತಂತ್ರ್ಯ 157 ನೇ ಸ್ಥಾನದಲ್ಲಿದೆ. ಪಾಕಿಸ್ತಾನಕ್ಕಿಂತ ನಾವು ಹಿಂದೆ ಬಿದ್ದಿದ್ದೇವೆ. ಪ್ರಧಾನಮಂತ್ರಿ, ಅಮಿತ್ ಶಾ ಗೆ ಒಂದು ಪ್ರಶ್ನೆ ಕೇಳುವ ರೈಟ್ಸ್ ಇಲ್ಲ. ದೇಶದಲ್ಲಿ ಪತ್ರಿಕಾ ಸ್ವಾತಂತ್ರ್ಯವೇ ಇಲ್ಲ ಎಂದು ಹೇಳಿದರು.

ಪಶ್ಚಿಮ ಬಂಗಾಲ ಚುನಾವಣೆಯಲ್ಲಿ ಚುನಾವಣಾ ಆಯೋಗ ಸಂಶಯಾಸ್ಪದ ರೀತಿಯಲ್ಲಿ ನಡೆದುಕೊಂಡಿದೆ. ವಿರೋಧ ಪಕ್ಷಗಳಿಗೆ ಅವರ ಮೇಲೆ ವಿಶ್ವಾಸ, ನಂಬಿಕೆ ಇಲ್ಲ. ಇದೊಂದು ಕೆಟ್ಟ ಪರಿಸ್ಥಿತಿ. ದೇಶದಲ್ಲಿ ಚುನಾವಣಾ ಆಯೋಗದ ಬಗ್ಗೆ ಯಾರು ಸಹ ಸಂಶಯ ಪಡುತ್ತಿರಲಿಲ್ಲ. ನಿಷ್ಪಕ್ಷಪಾತ, ಸ್ವತಂತ್ರವಾಗಿ ನಿರ್ವಹಣೆ ಮಾಡುತ್ತಿದ್ದರು. ಇವತ್ತು ಆ ಪರಿಸ್ಥಿತಿ ಇಲ್ಲ, ಚುನಾವಣೆ ಗೆಲ್ಲಲು ಏನು ಮಾಡಬೇಕು ಅದನ್ನು ಬಿಜೆಪಿ ಮಾಡುತ್ತಿದೆ. ಎಲ್ಲವನ್ನೂ ಉಪಯೋಗಿಸುತ್ತಿದೆ ಎಂದು ಅವರು ಹೇಳಿದರು.

ಪಂಜಾಬ್ ಚುನಾವಣೆ ಬರುತ್ತಿದ್ದು, ಹಾಗಾಗಿ ಇಡಿ, ಐ.ಟಿ ಅಲ್ಲಿಗೆ ಹೋಗಿದ್ದಾರೆ. ಪಂಜಾಬ್ ಚುನಾವಣೆ ಮುಗಿಯುತ್ತಿದ್ದಂತೆ ಇವರೆಲ್ಲ ಕರ್ನಾಟಕಕ್ಕೆ ಬರ್ತಾರೆ. ಇ.ಡಿ, ಐ.ಟಿ ಬಂದು ಬಿಜೆಪಿಗೆ ಸಹಾಯ ಮಾಡ್ತಾರೆ. ಬಿಜೆಪಿಯವರು ಇಂತಹ ಎಲ್ಲ ಸಂಸ್ಥೆಗಳನ್ನು ಚುನಾವಣೆ ಗೆಲ್ಲುವುದಕ್ಕೆ ಬಳಸುತ್ತಿದ್ದಾರೆ ಎಂದು ಅವರು ಆರೋಪಿಸಿದರು.

ರಾಜ್ಯಕ್ಕೆ ಸಿಇಟಿ ಬಿಟ್ಟು ಬಿಡಿ

ರಾಜ್ಯದಲ್ಲಿ ನೀಟ್ ಬದಲು ಸಿಇಟಿ ಜಾರಿ ಚರ್ಚೆ ವಿಚಾರಕ್ಕೆ ಸಂಬಂಧಿಸಿ ಮಾತನಾಡಿದ ಸಚಿವ ದಿನೇಶ್ ಗುಂಡೂರಾವ್, ರಾಷ್ಟ್ರ ಮಟ್ಟದ ಪರೀಕ್ಷೆಯಲ್ಲಿ ಸಾಕಷ್ಟು ಬಾರಿ ಹಗರಣ ನಡೆದಿದೆ. ದೇಶದ ಮಕ್ಕಳ ಭವಿಷ್ಯದಲ್ಲಿ ಕೇಂದ್ರ ಸರ್ಕಾರ ಚೆಲ್ಲಾಟ ಆಡುತ್ತಿದೆ.

ನಮ್ಮಲ್ಲಿ ಸಿಇಟಿ ಇದ್ದಾಗ ಈ ರೀತಿ ತೊಂದರೆ ಆಗುತ್ತಿರಲಿಲ್ಲ. ನಮ್ಮ ರಾಜ್ಯದ ಮಕ್ಕಳ ಹಿತರಕ್ಷಣೆ ಕಾಯುವ ಎಲ್ಲ ಶಕ್ತಿ ನಮಗಿದೆ. ಎಲ್ಲವನ್ನೂ ಯಾಕೆ ಕೇಂದ್ರೀಕೃತ ಮಾಡಬೇಕು, ಪ್ರತಿಯೊಂದು ದೆಹಲಿ ನಿಯಂತ್ರಣ ಯಾಕೆ, ನಾವು ರಾಜ್ಯ ಇಟ್ಟುಕೊಂಡು ಯಾಕೆ ಇಲ್ಲಿ ಇದ್ದೇವೆ.? ಗೊತ್ತಾಗದೆ ಎಷ್ಟು ಹಗರಣ ನಡೆದಿದೆ ಗೊತ್ತಿಲ್ಲ, ಸಿಇಟಿಯನ್ನು ರಾಜ್ಯಕ್ಕೆ ಬಿಟ್ಟು ಬಿಡಿ ಎಂದು ಹೇಳಿದರು.

ಗೃಹ ಸಚಿವ ಡಾ.ಜಿ.ಪರಮೇಶ್ವರ್ ಮುಖ್ಯಮಂತ್ರಿಯಾಗಲಿ ಎಂಬ ಮಾಜಿ ಸಚಿವ ರಾಜಣ್ಣ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿದ ಸಚಿವ ದಿನೇಶ್ ಗುಂಡೂರಾವ್, ನಮ್ಮಲ್ಲಿ ಯಾವುದೇ ಗೊಂದಲ, ಚರ್ಚೆ ಇಲ್ಲ. ತುಮಕೂರಿನಲ್ಲಿ ಎಲ್ಲ ಒಟ್ಟಿಗೆ ಹೋಗಿ ಸಮಾವೇಶ ಮಾಡಿದ್ದೇವೆ. ಮಾಧ್ಯಮದವರು ಕೇಳಿದಾಗ ಕೆಲವರು ಮಾತನಾಡುತ್ತಾರೆ. ಕೇಳಿದಾಗ ಏನೋ ಹೇಳಿ ಬಿಡುತ್ತಾರೆ. ನಾವೆಲ್ಲಾ ಒಟ್ಟಾಗಿ ಇದ್ದೇವೆ ಎಂದು ಸ್ಪಷ್ಟಪಡಿಸಿದರು.

ಸಾಮಾಜಿಕ ಜಾಲತಾಣದಲ್ಲಿ ಕಾಕ್ರೋಚ್ ಜನತಾ ಪಾರ್ಟಿ ಸದ್ದು ವಿಚಾರವಾಗಿ ಮಾತನಾಡಿದ ಸಚಿವರು, ದೇಶದಲ್ಲಿ ಅರಾಜಕತೆ ಎಷ್ಟಿದೆ ಅದರ ಕಾಕ್ರೋಚ್ ಜನತಾ ಪಾರ್ಟಿಗೆ ಸಬ್ಸ್‌ಕ್ರಿಪ್ಷನ್ ಬಿಜೆಪಿ ಪಕ್ಷದ

ಸಬ್ಸ್‌ಕ್ರಿಪ್ಷನ್ ಹೆಚ್ಚಾಗಿದೆ. ಈ ಪಾರ್ಟಿಯ ಸಾಮಾಜಿಕ ಜಾಲತಾಣ ಖಾತೆಯನ್ನು ನಿರ್ಬಂಧಿಸುವ ಕೆಲಸ ಆಗಿದೆ. ದೇಶದ ಆರ್ಥಿಕ ಪರಿಸ್ಥಿತಿ ಕೆಟ್ಟುಹೋಗಿದೆ. ಮನಮೋಹನ್ ಸಿಂಗ್ ಸರ್ಕಾರ ಇದ್ದಾಗ ಮೋದಿಯವರು ಭಾಷಣ ಬಿಗಿಯುತ್ತಿದ್ದರು. ಈಗ ದೇಶದ ರುಪಾಯಿ ಮೌಲ್ಯ ಅಮೆರಿಕ ಡಾಲರ್ ಜೊತೆಯಲ್ಲ, ಪಾಕಿಸ್ತಾನ, ಬಾಂಗ್ಲಾದೇಶದ ಕರೆನ್ಸಿ ಮೌಲ್ಯಕ್ಕಿಂತಲೂ ಕೆಳಮಟ್ಟಕ್ಕೆ ಕುಸಿದಿದೆ. ಮೋದಿಯವರ ವಿದೇಶಾಂಗ ನೀತಿ, ಆರ್ಥಿಕ ಶಕ್ತಿ ಏನೆಂದೇ ಅರ್ಥ ಆಗುವುದಿಲ್ಲ. ವಿಶ್ವಮಟ್ಟದಲ್ಲಿ ಭಾರತ ಸೂಪರ್ ಪವರ್ ಎಂದು ಬಿಂಬಿಸುತ್ತಿದ್ದರು, ಆದರೆ ದೇಶದ ಜಿಡಿಪಿ ಆರನೇ ಸ್ಥಾನಕ್ಕೆ ಇಳಿದಿದೆ ಎಂದು ವ್ಯಂಗ್ಯವಾಡಿದರು.

ಕೃಷ್ಣ ಜೆ.ಪಾಲೆಮಾರ್ ನೇತೃತ್ವದ 4 ಸಭಾಭವನ ಲೋಕಾರ್ಪಣೆ

ಸಂ.ಕ.ಸಮಾಚಾರ, ಮಂಗಳೂರು

ಮಂಗಳೂರು ಮಹಾನಗರದ ಜೆಪ್ಪು ಕಡೆಕಾರು, ಜೆಪ್ಪಿನಮೊಗರು ನೇತ್ರಾವತಿ ನದಿ ತೀರದ ಪ್ರದೇಶದಲ್ಲಿನ ನೇತ್ರಾವತಿ ಸಭಾಂಗಣದಲ್ಲಿ ಕೃಷ್ಣ ಜೆ.ಪಾಲೆಮಾರ್ ನೇತೃತ್ವದ ನಾಲ್ಕು ಸಭಾಭವನಗಳ ಲೋಕಾರ್ಪಣೆಗೆ ಚಾಲನೆ ನೀಡುವ ಸಮಾರಂಭ ಜರುಗಿತು.

ಮಾಜಿ ಸಚಿವ ಕೃಷ್ಣ ಜೆ. ಪಾಲೆಮಾರ್ ಅವರ ನೇತೃತ್ವದಲ್ಲಿ ಸಾರ್ವಜನಿಕ ಸಭೆ ಹಾಗೂ ಸಮಾರಂಭಗಳಿಗಾಗಿ ನಿರ್ಮಿಸಲಾದ ನೇತ್ರಾವತಿ ಸಭಾಭವನ, ಪಾಲೆಮಾರ್ ಕನ್ವೆನ್ಷನ್ ಸೆಂಟರ್, ಪಾಲೆಮಾರ್ ಫಾರ್ಮ್ಸ್ ಮತ್ತು ಪಾಲೆಮಾರ್ ಗಾರ್ಡನ್ ಸೇರಿ ನಾಲ್ಕು ಸೌಲಭ್ಯಗಳ ಲೋಕಾರ್ಪಣೆಗೆ ಸಿದ್ಧತೆ ನಡೆದಿದ್ದು, ಅಧಿಕೃತ ಲೋಕಾರ್ಪಣೆಯು ಮೇ 23, 2026ರಂದು ನಡೆಯಲಿದೆ. ಅದಕ್ಕೂ ಮುನ್ನ ಶುಕ್ರವಾರ ಬೆಳಗ್ಗೆ 10.30ಕ್ಕೆ ಲೋಕಾರ್ಪಣೆಗೆ ಧಾರ್ಮಿಕ ಕಾರ್ಯಕ್ರಮಗಳ ಮೂಲಕ ಚಾಲನಾ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಸ್ವಾಗತ ಭಾಷಣ ವನ್ನುಯೋಗಿಶ್ ಅವರು ನೆರವೇರಿಸಿದರು. ಬಳಿಕ ವೇದಿಕೆಯಲ್ಲಿ ಗಣ್ಯರನ್ನು ಫಲಪುಷ್ಪ ನೀಡಿ ಗೌರವಿಸಲಾಯಿತು. ದೀಪ ಪ್ರಜ್ವಲನೆಯ ಮೂಲಕ ಲೋಕಾರ್ಪಣೆಗೆ ಚಾಲನೆ ನೀಡಲಾಯಿತು. ವೇದಿಕೆಯಲ್ಲಿ ಪಾಲೆಮಾರ್ ಕುಟುಂಬಸ್ಥರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದ ನಿರೂಪಣೆಯನ್ನು ಕದ್ರಿ ನವನೀತ ಶೆಟ್ಟಿಯವರು ನೆರವೇರಿಸಿದರು.

ಮಾತೆ ಶಕುಂತಲಾ ನರೇಂದ್ರನಾಥ ಕೋಟೆಕಾರ್ ಮಾತನಾಡಿ, ಚಾಲನೆ ಒಂದು ದೈವಿಕ ಶಕ್ತಿಯೊಂದಿಗೆ ಸಂಬಂಧ ಹೊಂದಿದೆ ಎಂದು ಅಭಿಪ್ರಾಯಪಟ್ಟರು. ಸುಮಾರು 40 ವರ್ಷಗಳ ಬಳಿಕ ಮತ್ತೆ ನೇಮೋತ್ಸವ ನಡೆದಿರುವುದು ಕಾರ್ಣಿಕ ಎಂದು ಅವರು ಹೇಳಿದರು. ಈ ಸ್ಥಳದ ಅಭಿವೃದ್ಧಿ ಮತ್ತು ಬೆಳವಣಿಗೆಯಲ್ಲಿ ದೈವಿಕ ಶಕ್ತಿ ಅಡಗಿದೆ ಎಂದರು.

ಶ್ರೀನಿತಿನ್ ನರೇಂದ್ರನಾಥ ಯೋಗೇಶ್ವ ರೇಶ್ವರ ಸ್ವಾಮೀಜಿ ಆಶೀರ್ವಚನ ನೀಡಿ, ಈ ಕ್ಷೇತ್ರದ ಮಹಿಮೆ ಅಧ್ಯಾತ್ಮಿಕ ಚಿಂತನೆಯಿಂದ ಬಂದಿರುವುದು ಎಂದು ಹೇಳಿದರು. ಸಭಾಂಗಣಗಳು ಕೇವಲ ಸಮಾರಂಭಗಳ ಸ್ಥಳವಲ್ಲ, ಅವು ಆತ್ಮೀಯತೆ ಮತ್ತು ಸಮಾಜದ ಅಭಿವೃದ್ಧಿಗೆ ಕೇಂದ್ರವಾಗಬೇಕು ಎಂದು ಹೇಳಿದರು. ಲೋಕ ಸಮೃದ್ಧಿಯತ್ತ ಸಾಗಬೇಕೆಂಬ ಆಶಯವನ್ನು ವ್ಯಕ್ತಪಡಿಸಿದರು.

ಶ್ರೀಧಾಮ ಮಾಣಿಲದ ಶ್ರೀಮೋಹನ ದಾಸ ಪರಮಹಂಸ ಸ್ವಾಮೀಜಿ ಮಾತನಾಡಿ, ಈ ಕ್ಷೇತ್ರದ ಪವಿತ್ರತೆಯನ್ನು ಅನುಭವಿಸಬೇಕು ಎಂದು ಹೇಳಿದರು. ಧರ್ಮ ಮತ್ತು ಪ್ರೀತಿಯ ಅಡಿಪಾಯದಲ್ಲಿ ಸಮಾಜ ಬೆಳೆಯಬೇಕು ಎಂದುಹೇಳಿದರು. ಕೃಷ್ಣ ಜೆ. ಪಾಲೆಮಾರ್‌ಅವರ ಸಮಾಜ ಮುಖಿ ಕಾರ್ಯವನ್ನು ಶ್ಲಾಘಿಸಿದರು.

ಮಾಜಿ ಸಚಿವ ಕೃಷ್ಣ ಜೆ. ಪಾಲೆಮಾರ್ ಮಾತನಾಡಿ, ನೇತ್ರಾವತಿ ತಟದಲ್ಲಿರುವ ಈ ಸಭಾಭವನಗಳು ಸಾರ್ವಜನಿಕ ಉಪಯೋಗಕ್ಕೆ ಸಮರ್ಪಿತವಾಗಿವೆ ಎಂದು ಹೇಳಿದರು. ಸಾಂಸ್ಕೃತಿಕ ಮತ್ತು ಸಾಮಾಜಿಕ ಬೆಳವಣಿಗೆಯ ಮೂಲಕ ಸಮುದಾಯ ಅಭಿವೃದ್ಧಿ ಸಾಧ್ಯ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮೂಡಬಿದ್ರೆ ಶಾಸಕ ಉಮಾನಾಥ ಕೋಟ್ಯಾನ್ ಮಾತನಾಡಿ, ಈ ಯೋಜನೆಗಳು ಒಂದು ಮಹತ್ವದ ಸಾಧನೆ ಎಂದ ಅವರು ಪಾಲೆಮಾರ್ ಅವರನ್ನು ತಮ್ಮ ರಾಜಕೀಯ ಗುರುಗಳಾಗಿ ಗುರುತಿಸಿ ಪ್ರಶಂಸೆ ವ್ಯಕ್ತಪಡಿಸಿದರು. ಈ ರೀತಿಯ ಯೋಜನೆಗಳು ಮುಂದಿನ ಪೀಳಿಗೆಗೆ ಉಪಯುಕ್ತ ವಾಗಲಿದೆ ಎಂದು ಹೇಳಿದರು.

ಬೇಡಿಕೆಗೆ ತಕ್ಕಂತೆ ಹಾಸ್ಟೆಲ್ ನಿರ್ಮಾಣ

**ಸಂ.ಕ.ಸಮಾಚ